# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರು [ರಾಜಾಜಿನಗರ] ರವರ ಕಛೇರಿ, ಬಿ.ಬಿ.ಎಂ.ಪಿ.
ವಾಣಿಜ್ಯ ಸಂಕೀರ್ಣ, 2ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು10

ಸಂಖ್ಯೆ: ಸ.ಕಾ.ನಿ.ಅ/ರಾನ/ಪಿಆರ್/ /21-22. ದಿನಾಂಕ: 08-06-2021

**ಸಭಾ ಸೂಚನಾ ಪತ್ರ:-**

**ವಿಷಯ:** ವಾರ್ಡ್ ನಂ. 100/ಬಸವೇಶ್ವರನಗರ ವಾರ್ಡ್ ಸಮಿತಿ ಸಭೆಗೆ ಹಾಜರಾಗುವ ಬಗ್ಗೆ

**************

ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ. ರವರ ಆದೇಶದ ರೀತ್ಯಾ ವಾರ್ಡ್ ನಂ. 100/ಬಸವೇಶ್ವರನಗರ ವಾರ್ಡ್ ಸಮಿತಿ ಸಭೆಯನ್ನು ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ದಿನಾಂಕ: **10-06-2021** ರಂದು ಬೆಳಗ್ಗೆ **11.00** ಗಂಟೆಗೆ ವಾರ್ಡ್ ಸಮಿತಿ ಸಭೆಯು ಬಿ.ಬಿ.ಎಂ.ಪಿ. **ವಾರ್ಡ್ ಕಛೇರಿ, ಬಸವೇಶ್ವರನಗರ** ಇಲ್ಲಿ ಜರುಗಲಿದ್ದು, ತಾವುಗಳು ಈ ಸಭೆಗೆ ತಪ್ಪದೇ ಹಾಜರಾಗಲು ಕೋರಲಾಗಿದೆ.

**ಸಭೆಯಲ್ಲಿ ಚರ್ಚಿಸುವ ವಿಷಯಗಳು:-**

1. ಕೋವಿಡ್-19ರ ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ
2. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ
3. ವಾರ್ಡ್‌ಗಳಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.
4. ವಾರ್ಡ್‌ನ ವಿವಿಧ ಅಭಿವೃದ್ಧಿ ಕಾರ್ಯಗಳ ಬಗ್ಗೆ.
5. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ.
6. ಬೀದಿ ದೀಪಗಳ ನಿರ್ವಹಣೆ ಬಗ್ಗೆ.
7. ವಿದ್ಯುತ್ ಸರಬರಾಜು [ಬೆಸ್ಕಾಂ] ಗೆ ಸಂಬಂಧಿಸಿದ ವಿಷಯದ ಬಗ್ಗೆ.
8. S.W.D ಕಾಮಗಾರಿ ಪ್ರಗತಿಯಲ್ಲಿರುವ ಹಿನ್ನಲೆಯಲ್ಲಿ ಮಳೆ ನೀರಿನಿಂದ ಮುಳುಗಡೆಯಾಗುವ ಪ್ರದೇಶಗಳ ಸಮಸ್ಯೆ ಬಗ್ಗೆ.

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 100

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.

ಪು.ತಿ.ನೋ.

Scanned with CamScanner

5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡಬ್ಲ್ಯೂ.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ, ಬೆಂಗಳೂರು ರವರ

   ಮಾಹಿತಿಗಾಗಿ ಸಲ್ಲಿಸಿದೆ
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ,] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [S.W.D] ರವರ ಮಾಹಿತಿಗಾಗಿ ಸಲ್ಲಿಸಿದೆ.
10. ಕಾಂಟ್ರಕ್ಟ್ ಟ್ರೇಸಿಂಗ್, ನೋಡಲ್ ಅಧಿಕಾರಿ
11. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಹೋಮ್ ಕ್ವಾರಂಟೈನ್, ಸ್ಕ್ವಾಡ್ ನೋಡಲ್ ಅಧಿಕಾರಿ, ರಾಜಾಜಿನಗರ ವಿಭಾಗ,
13. ಕಲ್ಯಾಣಾಧಿಕಾರಿ, ಪಶ್ಚಿಮ ವಲಯ
14. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಪಶ್ಚಿಮ ವಲಯ
15. ಠಾಣಾಧಿಕಾರಿಗಳು, ಬಸವೇಶ್ವರನಗರ
16. ಸಂಚಾರಿ ಪೋಲಿಸ್ ಠಾಣೆ, ವಿಜಯನಗರ
17. ಸಹ ಕಂದಾಯ ಅಧಿಕಾರಿ [ರಾಜಾಜಿನಗರ] ವಲಯ ರವರ ಮಾಹಿತಿಗಾಗಿ ಸಲ್ಲಿಸಿದೆ.
18. ಕಚೇರಿ ಕಡತಕ್ಕೆ.

Scanned with CamScanner

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

### ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 100, ಬಸವೇಶ್ವರನಗರ, ಬೆಂಗಳೂರು

ಸಂಖ್ಯೆ:ಸ.ಅ/ವಾ-100/ಪಿಆರ್/ 05 / 2021-22 ದಿನಾಂಕ: 10/6/2021

**ವಾರ್ಡ್ ಸಮಿತಿ ಸಭೆಯ ನಡವಳಿಗಳು:-**

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ. ರವರ ಆದೇಶ ಸಂಖ್ಯೆ: ಬಿ12[5]ಪಿಆರ್/35/2020-21. ದಿನಾಂಕ: 21.09.2020ರ ಆದೇಶದಂತೆ ದಿನಾಂಕ: 10-06-2021 ರಂದು ವಾರ್ಡ್ ನಂ. 100 ಬಸವೇಶ್ವರನಗರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು:

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ದ್ಯವರಾಜ್, ನೋಡಲ್ ಅಧಿಕಾರಿಗಳು, ಎಡಿ.ಟಿ.ಪಿ. ವಾರ್ಡ್ ನಂ. 100
2. ಶ್ರೀ ಸೋಮಶೇಖರ್, ಸಹಾಯಕ ಅಭಿಯಂತರರು, ವಾರ್ಡ್ ನಂ. 100
3. ಶ್ರೀಮತಿ ಸಂಧ್ಯಾ.ಕೆ.ಪಿ. ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ರಘು, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ಮಂಜುನಾಥ್, ಸಂಚಾರಿ ಪೋಲಿಸ್ ಅಧಿಕಾರಿಗಳು
6. ಶ್ರೀ ಸಂಗಪ್ಪ, ಪೋಲಿಸ್ ಠಾಣಾ ಅಧಿಕಾರಿ,
7. ಶ್ರೀ ಮಾರುತಿ, ಅರಣ್ಯಾಧಿಕಾರಿಗಳು
8. ಶ್ರೀ ಮಲ್ಲೇಶ್, ಕಂದಾಯ ಅಧಿಕಾರಿ
9. ಶ್ರೀ ಮೋಹನ್ ಕುಮಾರ್ , ಬಿ.ಡಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿ.

**ಕೋವಿಡ್ – 19 ಸಾಂಕ್ರಮಿಕ ರೋಗದ ಬಗ್ಗೆ:-**

1. ನೋಡಲ್ ಅಧಿಕಾರಿಗಳು ಮಾತನಾಡಿ ತಾತ್ಕಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಸ್ಥಳಗಳಲ್ಲಿ ಕ್ಯಾಂಪ್‌ಗಳನ್ನು ಹಮ್ಮಿಕೊಂಡು ಹೆಚ್ಚಿನ ಪರೀಕ್ಷೆ ನಡೆಸುವಂತೆ ಸೂಚಿಸಿದರು.
2. ಕಡ್ಡಾಯವಾಗಿ ಮಾಸ್ಕ್ ಧರಿಸುವಂತೆ ಜನ ಜಾಗೃತಿ ಮೂಡಿಸಲು ಧ್ವನಿವರ್ಧಕವಿರುವ ಆಟೋಗಳಲ್ಲಿ ಸಾಯಂಕಾಲ 5 ರಿಂದ 7 ಗಂಟೆಯವರೆಗೆ ಜನ ನಿಬಿಡ ಪ್ರದೇಶಗಳಲ್ಲಿ ಪ್ರಚಾರ ಮಾಡಲು ವ್ಯವಸ್ಥೆ ಮಾಡುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಘನ ತ್ಯಾಜ್ಯದ ಗುತ್ತಿಗೆದಾರರಿಗೆ ಸೂಚಿಸಿದರು. ಜೊತೆಗೆ ಬೀದಿ ಬದಿಗಳಲ್ಲಿ ತಳ್ಳುವಗಾಡಿ ಮತ್ತು ಇತರೆ ವಾಣಿಜ್ಯ ಚಟುವಟಿಕೆದಾರರಿಗೆ ತ್ಯಾಜ್ಯವನ್ನು ಸೂಕ್ತವಾಗಿ ವಿಲೇವಾರಿ ಮಾಡುವಂತೆ ಜಾಗೃತಿ ಮೂಡಿಸಲು ಸೂಚಿಸಿದರು.
3. ಮಾಸ್ಕ್ ಧರಿಸದೆ ಸಾರ್ವಜನಿಕವಾಗಿ ಓಡಾಡುವವರಿಗೆ ಕಡ್ಡಾಯವಾಗಿ ನಿಯಮಾವಳಿಗಳನ್ವಯ ದಂಡ ವಿಧಿಸುವುದು ಮತ್ತು ಮಾಸ್ಕ್ ಧರಿಸುವಂತೆ ಹಾಗೂ ಸಾಮಾಜಿಕ ಅಂತರ ಕಾಪಾಡಿಕೊಳ್ಳುವಂತೆ ಮನವೊಲಿಸುವ ಕೆಲಸವನ್ನು ನಿರ್ವಹಿಸುವಂತೆ ಸೂಚಿಸಿದರು.

**ಸ್ವಚ್ಚತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ :-**

1. ಆರ್.ಡಬ್ಲ್ಯೂ.ಎ ಗಳನ್ನು ಮತ್ತು ಸ್ವಯಂ ಸೇವಕರುಗಳನ್ನು ಸಂಪರ್ಕಿಸಿ ಕಸ ವಿಂಗಡಣೆ ಮಹತ್ವ ಮತ್ತು ಅವಶ್ಯಕತೆ ಬಗ್ಗೆ ತಿಳುವಳಿಕೆ ಮಾಡಿಸಲಾಗುತ್ತಿದೆ. ವಾರ್ಡಿನಲ್ಲಿ ಎಲ್ಲಾ

Scanned with CamScanner

ಬ್ಲಾಕ್ ಸ್ಪಾಟ್‌ಗಳನ್ನು ಪರಿಶೀಲಿಸಿ ಕಸ ವಿಂಗಡಣೆ ಮಾಡಲು ಸಂಬಂಧಪಟ್ಟ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

2. ಎಲ್ಲಾ ಆಟೋಗಳಿಗೆ ಜಿ.ಪಿ.ಎಸ್ ಮತ್ತು ಆರ್.ಎಫ್.ಐ.ಡಿ ಮತ್ತು ಧ್ವನಿವರ್ಧಕಗಳನ್ನು ಅಳವಡಿಸಲು ಸೂಚಿಸಲಾಯಿತು.

**ಕಾಮಗಾರಿ ವಿಭಾಗ :**

1. ಮಳೆಗಾಲ ಸಮಯದಲ್ಲಿ ರಸ್ತೆಯ ಮೇಲೆ ನೀರು ನಿಲ್ಲದಂತೆ ಮಳೆ ನೀರು ಸಾರಾಗವಾಗಿ ಹೋಗುವಂತೆ ಜಾಗವನ್ನು ಶುಚಿಯಾಗಿಡುವಂತೆ ಕ್ರಮ ಜರುಗಿಸುವುದು.
2. ಸಾರ್ವಜನಿಕರಿಂದ ಯಾವುದೇ ದೂರುಗಳು ಕಂಡುಬಂದಲ್ಲಿ ಕೂಡಲೇ ಸಹಕರಿಸಲು ಕ್ರಮಜರುಗಿಸಲು ಸೂಚಿಸಲಾಯಿತು.

**ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ :-**

1. ವಾರ್ಡ್ ವ್ಯಾಪ್ತಿಯಲ್ಲಿ ಪಾರ್ಕಿನಲ್ಲಿ ಹಾಗೂ ರಸ್ತೆ ಬದಿಯಲ್ಲಿನ ಬೀದಿ ದೀಪಗಳ ನಿರ್ವಹಣೆ ಕಾರ್ಯವನ್ನು ಕೈಗೊಳ್ಳುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

**ಕಂದಾಯ ವಿಭಾಗ:-**

1. ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಪಾವತಿಯನ್ನು ಬಾಕಿ ಉಳಿಸಿಕೊಂಡಿರುವ ವಸೂಲಾತಿಗೆ ಮುಖ್ಯ ಆದ್ಯತೆ ನೀಡುವಂತೆ ಸಂಬಂಧಪಟ್ಟ ಕಂದಾಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವತೆಯಿಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

10/6/2021

ನೋಡಲ್ ಅಧಿಕಾರಿಗಳು,
ವಾರ್ಡ್ ನಂ. 100/ಬಸವೇಶ್ವರನಗರ.

Scanned with CamScanner